1545 (1776) ಶ್ರೀ ಸಿ.ಎಸ್. ನಾಡಗೌಡ (ಅಪ್ಪಾಜಿ) (ಮುದ್ದೇಬಿಹಾಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುದ್ದೇಬಿಹಾಳ ತಾಲ್ಲೂಕು ನಲವತವಾಡ ಗ್ರಾಮವು ಈಗಾಗಲೇ 20,000 ಜನಸಂಖ್ಯೆಯನ್ನು ಹೊಂದಿದ್ದು ಗ್ರಾಮ ಪಂಚಾಯತಿಯಾಗಿ ಹಾಗೆಯೇ ಉಳಿದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ನಲವತವಾಡ ಗ್ರಾಮ ಪಂಚಾಯಿತಿ ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸಲು ಸರ್ಕಾರವು ಆಲೋಚಿಸಿದೆಯೇ?

ಇ) ಈ ಬಗ್ಗೆ ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) 1991ರ ಜನಗಣತಿಯ ಪ್ರಕಾರ ನಲವತವಾಡ ಗ್ರಾಮವು 10,925 ಜನಸಂಖ್ಯೆಯನ್ನು ಹೊಂದಿದ್ದು, ಗ್ರಾಮ ಪಂಚಾಯತಿಯಾಗಿ ಉಳಿದಿರುತ್ತದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಈಗ 2001ನೇ ಜನಗಣತಿಯ ಪ್ರಕ್ರಿಯೆಯು ಪ್ರಾರಂಭವಾಗಿರುವುದರಿಂದ ಸದರಿ ಕಾರ್ಯವು ಪೂರ್ತಿಯಾಗಿ ಮುಗಿದ ನಂತರ ಈ ಬಗ್ಗೆ ಪರಿಶೀಲಿಸಬಹುದಾಗಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಗೆ ಪ್ರತ್ಯೇಕ ನಿರ್ದೇಶನಾಲಯ

1546 (1979) ಶ್ರೀ ಆರ್. ನಾರಾಯಣ್ (ಬೆಳ್ಳಾವಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗೆ ಪ್ರತ್ಯೇಕ ನಿರ್ದೇಶನಾಲಯ (ಡೈರೆಕ್ಟೇಟ್) ರಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಆ) ಸದರಿ ಇಲಾಖೆಗೆ ಎರವಲು ಸೇವೆಯನ್ನು ಪಡೆಯುವುದನ್ನು ನಿಲ್ಲಿಸಿ ತಮ್ಮದೇ ಆದ ನೌಕರರನ್ನು ನೇಮಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಇ) ಗ್ರಾಮೀಣ ಪಂಚಾಯ್ತಿ ನೌಕರರನ್ನು ಸರ್ಕಾರಿ ನೌಕರರನ್ನಾಗಿ ಪರಿಗಣಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಈ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ.

ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ ವ್ಯಾಪ್ತಿಯಲ್ಲಿರುವ ಜಿಲ್ಲಾಪಂಚಾಯತ್, ತಾಲ್ಲೂಕು ಪಂಚಾಯತ್‌ಗಳಲ್ಲಿ ಈ ಇಲಾಖೆಯ ನೌಕರರಲ್ಲದೆ, ಬೇರೆ

ಅಭಿವೃದ್ಧಿ ಇಲಾಖೆಗಳಿಂದ ಹಾಗೂ ಆಡಳಿತ ಸೇವೆಗಳಿಂದ ನಿಯೋಜನೆ ಮೇರೆಗೆ ಸಿಬ್ಬಂದಿಯನ್ನು ಸರ್ಕಾರವು ಒದಗಿಸಿಕೊಡುತ್ತಿದ್ದು ಸದರಿ ಇಲಾಖೆಗೆ ಇತರೆ ಇಲಾಖೆಯ ಅನುಭವಿಗಳನ್ನು ಎರವಲು ಸೇವೆಯ ಮೇಲೆ ನೇಮಿಸಿಕೊಳ್ಳುವುದು ಅವಶ್ಯವಾಗಿದೆ. ಇಲಾಖೆಯಲ್ಲಿ ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಬೇಕಾಗಿರುವುದರಿಂದ ಇತರೆ ಇಲಾಖೆಯ ಅಧಿಕಾರಿಗಳನ್ನು ನಿಯೋಜನೆ ಮೇಲೆ ಪಡೆದು ಅವರ ಸೇವೆಯನ್ನು ಉಪಯೋಗಿಸಿಕೊಳ್ಳುವುದು ಅತ್ಯವಶ್ಯವಾಗಿರುತ್ತದೆ ಅಲ್ಲದೆ ಇಲಾಖೆಯಲ್ಲಿ ಅದರದೇ ಆದ ಸಾಕಷ್ಟು ಅಧಿಕಾರಿ ನೌಕರರು ಲಭ್ಯವಿರುವುದಿಲ್ಲ. ಆದ್ದರಿಂದ ಸದರಿ ಇಲಾಖೆಗೆ ಎರವಲು ಸೇವೆಯನ್ನು ಪಡೆಯುವುದನ್ನು ಮುಂದುವರೆಸಬೇಕಾಗುವುದು.

ಇ) ಇಲ್ಲ

ಪಂಚಾಯತ್ ವ್ಯವಸ್ಥೆಯನ್ನು ಉತ್ತಮಗೊಳಿಸುವುದು

1547 (1966) ಶ್ರೀ ಡಿ.ಆರ್. ಪಾಟೀಲ್ (ಗದಗ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಂಚಾಯತ್ ವ್ಯವಸ್ಥೆಯನ್ನು ಇನ್ನಷ್ಟು ಉತ್ತಮಗೊಳಿಸಲು ಹಾಗೂ ಈ ವ್ಯವಸ್ಥೆಯಲ್ಲಿ ಅನುಷ್ಠಾನಗೊಳಿಸುವ ಎಲ್ಲಾ ಕಾರ್ಯಕ್ರಮಗಳಲ್ಲಿ ಪ್ರಾಮಾಣಿಕತೆ ಮತ್ತು ಪಾರದರ್ಶಕತೆ ತರಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು;

ಆ) ಗ್ರಾಮೀಣ ಜನ ತಮ್ಮ ಗ್ರಾಮದ ಸಾರ್ವಜನಿಕ ಸ್ವತ್ತುಗಳನ್ನು ಸದುಪಯೋಗಪಡಿಸಿಕೊಳ್ಳುವ ಸಲುವಾಗಿ ಹಾಗೂ ಯೋಜನೆಗಳ ಅನುಷ್ಠಾನದ ತಿಳುವಳಿಕೆ ಪಡೆಯಲು ಗ್ರಾಮ ಸಭೆಗಳನ್ನು ಇನ್ನಷ್ಟು ಅರ್ಥಪೂರ್ಣ ಮಾಡಲು ಈಗಿರುವ ಕಾನೂನಿಗೆ ಬದಲಾವಣೆ ತರಬೇಕೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಶ್ರೀ ಎಂ.ವೈ ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಪಂಚಾಯತ್ ರಾಜ್ ವ್ಯವಸ್ಥೆಯನ್ನು ಉತ್ತಮಗೊಳಿಸಲು ಮತ್ತು ಅನುಷ್ಠಾನಗೊಳಿಸುವ ಕಾರ್ಯಕ್ರಮಗಳಲ್ಲಿ ಪಾರದರ್ಶಕತೆ ತರಲು ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ, 1993ಕ್ಕೆ ತಜ್ಞರ ಸಮಿತಿ ವರದಿ ಅನ್ವಯ ಹಲವಾರು ಪ್ರಕರಣಗಳಿಗೆ ತಿದ್ದುಪಡಿಯನ್ನು ಮಾಡಿದೆ.

ಆ) ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 1993ರ ಪ್ರಕರಣ 3ರನ್ವಯ ಗ್ರಾಮಸಭೆಗಳನ್ನು ಸಡೆಸುವುದರ ಮೂಲಕ ಗ್ರಾಮೀಣ ಜನತೆಗೆ ತಮ್ಮ ಗ್ರಾಮದ ಸಾರ್ವಜನಿಕ ಸ್ವತ್ತುಗಳನ್ನು ಸದುಪಯೋಗಪಡಿಸಿಕೊಳ್ಳುವ ಸಲುವಾಗಿ ಮತ್ತು ಯೋಜನೆ ಅನುಷ್ಠಾನದ ಬಗ್ಗೆ ಅವರಲ್ಲಿ ಅರಿವು ಮೂಡಿಸಲು ಗ್ರಾಮ ಸಭೆಗಳನ್ನು ವರ್ಷದಲ್ಲಿ ಕನಿಷ್ಠಪಕ್ಷ ಎರಡು ಬಾರಿ ಏಪ್ರಿಲ್/ಮೇ ಮತ್ತು ಅಕ್ಟೋಬರ್/ನವೆಂಬರ್ ತಿಂಗಳಲ್ಲಿ ಸಮಾವೇಶಗೊಳಿಸುವಂತೆ ಕಡ್ಡಾಯ ಮಾಡಿದೆ. ಈ ಬಗ್ಗೆ ಸಂಪೂರ್ಣವಾಗಿ ಕಾರ್ಯಕ್ರಮಗಳ ಬಗ್ಗೆ ತಿಳುವಳಿಕೆ ನೀಡುವ ಕುರಿತು ಸರ್ಕಾರವು 22 ಅಂಶಗಳನ್ನೊಳಗೊಂಡಂತೆ ಮಾರ್ಗಸೂಚಿಗಳನ್ನು 1999ರಲ್ಲಿ ಹೊರಡಿಸಿದೆ. ಈ ಬಗ್ಗೆ ಸದ್ಯಕ್ಕೆ ಯಾವುದೇ ಕಾನೂನಿನ ತಿದ್ದುಪಡಿ ತರುವ ಪ್ರಸ್ತಾಪ ಸರ್ಕಾರದ ಮುಂದಿರುವುದಿಲ್ಲ. ಆದರೆ ಇನ್ನೂ ಹೆಚ್ಚಿನ ರೀತಿಯಲ್ಲಿ ಆಡಳಿತ ವ್ಯವಸ್ಥೆಯನ್ನು ಪಾರದರ್ಶಕವಾಗಿ ಬಲಪಡಿಸಲು ಕಾಲಕಾಲಕ್ಕೆ ಅವಶ್ಯಕತೆಗಳನುಗುಣವಾಗಿ ಸೂಕ್ತ ತಿದ್ದುಪಡಿಗಳನ್ನು ಸದನದ ಮುಂದೆ ತರಲಾಗುವುದು.